ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

ಸಿ.ಸಿ.958/2019

ಸಿ.ಡಬ್ಲ್ಯೂ-1, ಪಿ.ಡಬ್ಲ್ಯೂ-1

ದಿಃ **20.06.2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿಯ ಹೆಸರು | ಮಂಜುಳಾ |
| ತಂದೆ/ಗಂಡನ ಹೆಸರು | ದೇವನಾಯಕ |
| ವಯಸ್ಸು | 42 ವರ್ಷ |
| ಕೆಲಸ | ಗೃಹಿಣಿ |
| ವಾಸಸ್ಥಳ | ನಾಡಪ್ಪನಹಳ್ಳಿ ಗ್ರಾಮ, ಹುಣಸೂರು ತಾಲ್ಲೂಕು |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:**

ಆರೋಪಿ ನನ್ನ ಗಂಡ. ಚಾಸಾ-**2** ನನ್ನ ಮಗಳು. ಚಾಸಾ-**3** ಮತ್ತು **4** ನನ್ನ ತಂದೆ ತಾಯಿ. ಸುಮಾರು **7** ವರ್ಷದ ಹಿಂದೆ ನನ್ನ ಹಾಗೂ ಆರೋಪಿ ನಡುವೆ ನಮ್ಮ ದಾಂಪತ್ಯ ಜೀವನದಲ್ಲಿ ಸಣ್ಣ-ಪುಟ್ಟ ವಿಚಾರಕ್ಕೆ ಮನಸ್ತಾಪ ಉಂಟಾಗಿದ್ದು, ಈ ಬಗ್ಗೆ ನಾನು ಪೊಲೀಸರಿಗೆ ಮೌಖಿಕವಾಗಿ ತಿಳಿಸಿದ್ದೇ. ಆ ಸಮಯದಲ್ಲಿ ಪೊಲೀಸರು ಈಗ ತೋರಿಸುತ್ತಿರುವ ಎರಡು ಬರವಣಿಗೆಗಳ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ. ಸಾಕ್ಷಿ ತನ್ನ ಸಹಿ ಇರುವ ಎರಡು ಬರವಣಿಗೆಗಳನ್ನು ನೋಡಿ ಗುರುತಿಸಿದ್ದು, ಅವುಗಳು ದೂರು ಮತ್ತು ಮಹಜರ್ ಆಗಿದ್ದು ಅವುಗಳನ್ನು ನಿಪಿ-**1** ಮತ್ತು **2** ಎಂದು, ಅದರ ಮೇಲಿರುವ ಸಾಕ್ಷಿಯ ಸಹಿಗಳನ್ನು **1**(ಎ) ಮತ್ತು **2**(ಎ) ಎಂದು ಗುರುತಿಸಲಾಯಿತು. ನಿಪಿ-**1** ಮತ್ತು **2** ರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿಲ್ಲ. ಆರೋಪಿಯು ಎಂದೂ ನನಗೆ ದೈಹಿಕವಾಗಿ, ಮಾನಸಿಕವಾಗಿ ಆಗಲೀ ಕಿರುಕುಳ ನೀಡಿರುವುದಿಲ್ಲ, ನನ್ನ ಮೇಲೆ ಹಲ್ಲೆ ನಡೆಸಿರುವುದಿಲ್ಲ, ನನ್ನನ್ನು ನಿಂದಿಸಿರುವುದಿಲ್ಲ, ನನಗೆ ಯಾವುದೇ ರೀತಿಯ ಬೆದರಿಕೆ ಹಾಕಿರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಕೈಗೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ ವಕೀಲರಿಂದ**

ಸುಮಾರು 14 ವರ್ಷಗಳ ಹಿಂದೆ ಆರೋಪಿಯೊಂದಿಗೆ ನಾನು ಮದುವೆಯಾಗಿದ್ದು, ಮದುವೆಯಾಗಿ 2-3 ವರ್ಷಗಳ ಕಾಲ ಅನ್ಯೋನ್ಯವಾಗಿದ್ದು, ನಮ್ಮ ದಾಂಪತ್ಯ ಜೀವನದಲ್ಲಿ ಒಬ್ಬ ಹೆಣ್ಣು ಮಗಳು ಜನಿಸಿರುತ್ತಾರೆಂದರೆ ಸರಿ. ನಂತರ ದಿನಗಳಲ್ಲಿ 1 ನೇ ಆರೋಪಿ ನಾನು ಕುಂಟಿ ಎಂದು ತೀಟೆ ಜಗಳ ತೆಗೆದು ಗಲಾಟೆ ಮಾಡಿ ಮಾನಸಿಕವಾಗಿ ಹಾಗೂ ದೈಹಿಕವಾಗಿ ಕಿರುಕುಳ ನೀಡಿರುತ್ತಾರೆಂದರೆ ಸರಿಯಲ್ಲ. ದಿಃ05.01.2016 ರಾತ್ರಿ ಸುಮಾರು 7.00 ಗಂಟೆ ಸಮಯದಲ್ಲಿ ಆರೋಪಿ 1 ರಿಂದ ಜಗಳ ತೆಗೆದು ಮಾನಸಿಕವಾಗಿ ಹಾಗೂ ದೈಹಿಕವಾಗಿ ಕಿರುಕುಳ ನೀಡಿ ನನ್ನನ್ನು ಹಾಗೂ ಚಾಸಾ-2 ರವರನ್ನು ಮನೆಯಿಂದ ಹೊರಗೆ ಹಾಕಿ ಕೊಲೆ ಬೆದರಿಕೆ ಹಾಕಿರುತ್ತಾರೆಂದರೆ ಸರಿಯಲ್ಲ. ಈ ಬಗ್ಗೆ ನಾನು ಪೊಲೀಸರ ಮುಂದೆ ದೂರನ್ನು ನೀಡಿರುತ್ತೇನೆಂದರೆ ಸರಿಯಲ್ಲ.

ದಿಃ20.01.2016 ರಂದು  ಪೊಲೀಸರು ಘಟನಾ ಸ್ಥಳಕ್ಕೆ ಬಂದಿದ್ದು, ಅಲ್ಲಿ ನಾನು ಹಾಜರಿದ್ದು, ಘಟನಾ ಸ್ಥಳವನ್ನು ತೋರಿಸಿದ ಮೇರೆಗೆ ಚಾಸಾ-9 ಮತ್ತು 10 ರವರ ಸಮಕ್ಷಮ ಬೆಳಿಗ್ಗೆ 11-00 ರಿಂದ 12-00 ರವರೆಗೆ ನಿಪಿ-2 ರಂತೆ ಮಹಜರ್ ಕ್ರಮ ಕೈಗೊಂಡು, ನಿಪಿ-2 ಕ್ಕೆ ಅಲ್ಲಿಯೇ ನನ್ನ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ.

ಆರೋಪಿಯು ನನ್ನ ಗಂಡನಾಗಿದ್ದು, ಆರೋಪಿಯೊಂದಿಗೆ ರಾಜಿ ಮಾಡಿಕೊಂಡು ಈಗ ಒಟ್ಟಿಗೆ ದಾಪಂತ್ಯ ಜೀವನ ನಡೆಸುತ್ತಿದ್ದೇವೆಂದರೆ ಸರಿ. ಆ ಕಾರಣಕ್ಕಾಗಿ ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ನಿಜವಲ್ಲ.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು.